ಅಭಿಯಾನದಡಿ ಯಾವುದೇ ಹೊಸ ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ಸ್ಥಾಪಿಸಿಲ್ಲ. 2005–06ನೇ ಸಾಲಿನಲ್ಲಿ 126 ಸರ್ಕಾರಿ ಪ್ರೌಢಶಾಲೆಗಳನ್ನು ಸ್ಥಾಪಿಸಲಾಗಿದೆ.

1047 (1090) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ವಸತಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ;

ಅ) ಕರ್ನಾಟಕ ಗೃಹ ನಿರ್ಮಾಣ ಮಂಡಳಿ ವತಿಯಿಂದ ಎಷ್ಟು ಮನೆಗಳನ್ನು ನಿರ್ಮಾಣ ಮಾಡಲಾಗಿದೆ;

ಆ) ಎಷ್ಟು ಹೊಸ ಬಡಾವಣೆಗಳನ್ನು ನಿರ್ಮಾಣ ಮಾಡಲು ಸರ್ಕಾರ ತೀರ್ಮಾನ ಮಾಡಿದೆ;

ಇ) ಬೆಂಗಳೂರು ನಗರದಲ್ಲಿ ಎಷ್ಟು ಹೊಸ ಬಡಾವಣೆಗಳನ್ನು ಕರ್ನಾಟಕ ಗೃಹ ಮಂಡಳಿ ವತಿಯಿಂದ ನಿರ್ಮಾಣ ಮಾಡಲು ಕ್ರಮ ಕೈಗೊಂಡಿದೆ;

ಈ) ಯಾವ ಯಾವ ಸ್ಥಳಗಳಲ್ಲಿ ನಿರ್ಮಾಣ ಮಾಡಲು ತೀರ್ಮಾನಿಸಲಾಗಿದೆ;

ಉ) 2005–06ನೇ ಸಾಲಿನಲ್ಲಿ ಗ್ರಾಮೀಣ ಆಶ್ರಯ ಯೋಜನೆಯಡಿ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ; ಇದಕ್ಕಾಗಿ ಎಷ್ಟು ಹಣವನ್ನು ಒದಗಿಸಲಾಗಿದೆ;

ಊ) 2005–06ನೇ ಸಾಲಿನಲ್ಲಿ ನಗರ ಪ್ರದೇಶದಲ್ಲಿ ಎಷ್ಟು ಆಶ್ರಯ ಮನೆಗಳನ್ನು ನಿರ್ಮಾಣ ಮಾಡಲಾಗಿದೆ (ಗ್ರಾಮೀಣ ಪ್ರದೇಶದ ಹಾಗೂ ನಗರ ಪ್ರದೇಶದ ಸಂಪೂರ್ಣ ವಿವರ ನೀಡುವುದು)?

ಶ್ರೀ ಡಿ.ಟಿ.ಜಯಕುಮಾರ್ (ವಸತಿ ಸಚಿವರು)

ಅ) ಕರ್ನಾಟಕ ಗೃಹ ಮಂಡಳಿ ವತಿಯಿಂದ ವಿವಿಧ ವರ್ಗದ ಒಟ್ಟು 72,175 ಮನೆಗಳನ್ನು ಈವರೆಗೆ ನಿರ್ಮಿಸಲಾಗಿರುತ್ತದೆ.

ಆ) ಕರ್ನಾಟಕ ಗೃಹ ಮಂಡಳಿಯಿಂದ 100 ವಸತಿ ಯೋಜನೆಯಡಿಯಲ್ಲಿ ಈಗಾಗಲೇ 60 ಹೊಸ ಬಡಾವಣೆಗಳನ್ನು ನಿರ್ಮಿಸಿದ್ದು, ಇನ್ನು 40 ಹೊಸ ಬಡಾವಣೆಗಳನ್ನು ನಿರ್ಮಿಸಲು ತೀರ್ಮಾನಿಸಲಾಗಿರುತ್ತದೆ.

ಹಾಗೂ ಮಂಡಳಿಯ ಇತರೆ ಯೋಜನೆಗಳಲ್ಲಿ ಒಟ್ಟು 27 ಬಡಾವಣೆಯನ್ನು ನಿರ್ಮಿಸಲು ತೀರ್ಮಾನಿಸಲಾಗಿರುತ್ತದೆ.

ಇ) ಕರ್ನಾಟಕ ಗೃಹ ಮಂಡಳಿ ವತಿಯಿಂದ ಬೆಂಗಳೂರು ನಗರದಲ್ಲಿ ಪ್ರಸ್ತುತ ಎರಡು ಹೊಸ ಬಡಾವಣೆಗಳನ್ನು ನಿರ್ಮಿಸಲಾಗುತ್ತಿದೆ.

ಈ) ಬೆಂಗಳೂರು ನಗರದಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ಪ್ರಸ್ತುತ ಸೂರ್ಯನಗರ, ಇಗ್ಗಲೂರು, ಬನಹಳ್ಳಿ, ಚಂದಾಪುರ, ಹೊಸೂರು ರಸ್ತೆ, ಬೆಂಗಳೂರು ಮತ್ತು ಕೆಂಗೇರಿ, ಬಂಡೇಮಠ ಮೈಸೂರು ರಸ್ತೆ, ಇಲ್ಲಿ ವಸತಿ ಯೋಜನೆಯನ್ನು ಹಮ್ಮಿಕೊಂಡಿರುತ್ತದೆ.

ಉ) ಗ್ರಾಮೀಣ ಆಶ್ರಯ ಯೋಜನೆಯಡಿ 2005–06ನೇ ಸಾಲಿಗೆ 226080 ಮನೆಗಳ ಗುರಿ ನೀಡಿದ್ದು ಡಿಸೆಂಬರ್ ಅಂತ್ಯದ ವೇಳೆಗೆ 19242 ಮನೆಗಳನ್ನು ನಿರ್ಮಿಸಲಾಗಿದ್ದು ಉಳಿದ ಮನೆಗಳನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.

2005–06ನೇ ಸಾಲಿನ ಮನೆಗಳನ್ನು ನಿರ್ಮಿಸಲು ಆಯವ್ಯಯದಲ್ಲಿ ಒಟ್ಟು ರೂ.242.88 ಕೋಟಿಗಳನ್ನು ಒದಗಿಸಲಾಗಿದ್ದು, ಇದುವರೆಗೂ ರೂ.167.80 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಊ) ನಗರ ಆಶ್ರಯ ಯೋಜನೆಯಡಿಯಲ್ಲಿ 2005–06ನೇ ಸಾಲಿಗೆ 50000 ಮನೆಗಳ ಗುರಿಯನ್ನು ಸರ್ಕಾರ ನಿಗದಿಪಡಿಸಿದ್ದು, ಈ ಗುರಿಗೆ ತಕ್ಕಂತೆ ಫಲಾನುಭವಿಗಳ ಆಯ್ಕೆ ಪ್ರಗತಿಯಲ್ಲಿರುತ್ತದೆ.

1048 (1091) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ;

ಅ) ಕನ್ನಡ ಮಾಧ್ಯಮ ಶಾಲೆಗಳಿಗೆ ಅನುಮತಿ ಪಡೆದು ಆಂಗ್ಲ ಮಾಧ್ಯಮ ಶಾಲೆಗಳನ್ನು ನಡೆಸುತ್ತಿರುವ ಇಂಗ್ಲೀಷ್ ಮಾಧ್ಯಮದ ಶಾಲೆಗಳ ಸಂಖ್ಯೆ ಎಷ್ಟು;

ಆ) ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?